**ದಿನಾಂಕ: 04-09-2023 ರಂದು ಸಾಕ್ಷಿಧಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ : ಎದುರುದಾರರ ಪರ ಶ್ರೀ.ಎಸ್ ಟಿ ಕೆ ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಸಾಕ್ಷಿಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ ಅದರಲ್ಲಿನ ಸಂಗತಿಗಳೆಲ್ಲ ಸತ್ಯವಿದ್ದು ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸುತ್ತೇನೆ.

ನಮ್ಮ ಕೆ ಎಸ್ ಆರ್ ಟಿ ಸಿ ಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಈ ಕೇಸ್ ನಡೆಸಲು ನನಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು, ಅದು ನಿ ಆರ್ 7 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಅರ್ಜಿದಾರರ ಪರ ಶ್ರೀ.ಆರ್ ಎಸ್ ಜಿ ಪರವಾಗಿ ಶ್ರೀ.ಆರ್ ಯು ಪಿ ವಕೀಲರಿಂದ**

ಈ ಅಪಘಾತಕ್ಕೆ ಸಂಬಂದಪಟ್ಟಂತೆ ಪೊಲೀಸರು ನನ್ನ ಹೇಳಿಕೆ ಪಡೆದುಕೊಂಡಿರಲಿಲ್ಲ. ಈ ಅಪಘಾತಕ್ಕೆ ಸಂಬಂದಪಟ್ಟಂತೆ ನಾನೇ ಪೊಲೀಸರಿಗೆ ದೂರು ನೀಡಿರುತ್ತೇನೆ. ಈ ಅಪಘಾತಕ್ಕೆ ಸಂಬಂದಪಟ್ಟಂತೆ ಪೊಲೀಸರು ನನ್ನ ಮರು ಹೆಳಿಕೆ ಪಡೆದರು ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಮರು ಹೇಳಿಕೆ ನೀಡಿದ್ದರೂ ಸಹ ನೀಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ28-05-2022 ರಂದು ಪೊಲೀಸರು ನನ್ನ ಮರು ಹೇಳಿಕೆ ಪಡೆದರು ಎಂದರೆ ಸರಿಯಲ್ಲ. ಪೊಲೀಸರು ನಾನು ನೀಡಿದ ದೂರಿನ ಆಧಾರದ ಮೇಲೆ ನಮ್ಮ ಕೆ ಎಸ್ ಆರ್ ಟಿ ಸಿ ಬಸ್ ಚಾಲಕ ಆರ್ ಡಬ್ಲ್ಯೂ 1 ರ ವಿರುದ್ಧ ದೋಷಾರೊಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದರೆ ಸರಿ. ಆ ದೋಷಾರೊಪಣ ಪಟ್ಟಿಯನ್ನು ಈವರೆಗೂ ಸಹ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿರುವುದಿಲ್ಲ. ಈ ಅಪಘಾತವು ನಮ್ಮ ಕೆ ಎಸ್ ಆರ್ ಟಿ ಸಿ ಬಸ್ ಚಾಲಕನ ನಿರ್ಲಕ್ಷತನದಿಂದ ಆಗಿದ್ದರೂ ಸಹ ಆ ಅಶೋಕ ಲೇಲಾಂಡ ಮಿನಿ ಗುಡ್ಸ ವಾಹನದ ಚಾಲಕನ ತಪ್ಪಿನಿಂದ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ. ಆ ದಿನ ಪ್ರಯಾಣಿಕರಿಗೆ ಟಿಕೇಟ್ ಅನ್ನು ಕೊಟ್ಟು ಹಿಂಬಾಗದ ಡೋರ್ ನ ಹತ್ತಿರ ಕುಳಿತಿರುವ ಕಾರಣ ಮುಂದೆ ಅಪಘಾತ ಹೇಗಾಯಿತು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಆ ಕಾರಣ ನಾನು ಆ ಅಶೋಕ ಲೇಲಾಂಡ ವಾಹನದ ಚಾಲಕನ ತಪ್ಪಿನಿಂದ ಈ ಅಘಘಾತವಾಗಿದೆ ಎಂದು ಸುಳ್ಳು ದೂರನ್ನು ಸಲ್ಲಿಸಿದ್ದೇನೆ ಎಂದರೆ

ಸರಿಯಲ್ಲ. ಆ ನಂತರ ಪೊಲಿಸರು ತನಿಖೆ ಮಾಡಿ ನಾನು ಸುಳ್ಳು ದೂರನ್ನು ಸಲ್ಲಿಸಿದ್ದೇನೆ ಎಂದು ನನ್ನ ಮರು ಹೇಳಿಕೆ ಪಡೆದು ನಮ್ಮ ಚಾಲಕನ ವಿರುದ್ದ ದೋಷಾರೊಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ಆ ದಿನ ಅಪಘಾತವು ನಮ್ಮ ಕೆ ಎಸ್ ಆರ್ ಟಿ ಸಿ ಬಸ್ ಚಾಲಕನ ತಪ್ಪಿನಿಂದಲೇ ಆಗಿರುವುದರಿಂದ ಆ ದೋಷಾರೋಪಣ ಪತ್ರವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿಲ್ಲ ಎಂದರೆ ಸರಿಯಲ್ಲ. ನಾನು ನಮ್ಮ ಬಸ್ ಚಾಲಕನನ್ನು ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಸಾಕ್ಷಿದಾರರ ಸಹಿ ಹಾನಗಲ್